# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ  ನ್ಯಾಯಾಲಯ, ಟಿ.ನರಸೀಪುರ

ದಿನಾಂಕ 02 ನೇ ಜೂನ್ 2026

**ಸಿ.ಸಿ. 998/2026**

ಪಿರ್ಯಾದುದಾರರುಃ ರಾಜ್ಯದ ಪರ ಬನ್ನೂರು ಪೊಲೀಸರು

ವಿರುದ್ಧ

ಆರೋಪಿಃ ರವೀಂದ್ರ.ಸಿ.ಎನ್,
ಬಿನ್ ನಾಗರಾಜು, ಸುಮಾರು 40 ವರ್ಷ,
ವಾಸಃ ಚಿಕ್ಕಪಾಳ್ಯ ಗ್ರಾಮ, ಅರಕೆರೆ ಹೋಬಳಿ,
ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ.

**ಆರೋಪಣೆ**

**ಶ್ರೀ. ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.**

ದಿನಾಂಕ 11.12.2025 ರಂದು ಬೆಳಿಗ್ಗೆ 10.00 ಗಂಟೆ ಸಮಯದಲ್ಲಿ ಬನ್ನೂರು ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಮಾಕನಹಳ್ಳಿ ಗ್ರಾಮದ ಮಹದೇವ, ಬಿನ್ ಗಾಡಿಮುದ್ದೇಗೌಡರವರ ವಾಸದ ಮನೆಯ ಮುಂಭಾಗ ಹಾದು ಹೋಗಿರುವ ಬನ್ನೂರು – ಶ್ರೀರಂಗಪಟ್ಟಣ ಮುಖ್ಯ ರಸ್ತೆಯಲ್ಲಿ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆ.ಎ–11/ಬಿ–8430 ನಂಬರಿನ Mahindra 575 Di sarpanch ಟ್ರ್ಯಾಕ್ಟರ್ (ವ್ಯವಸಾಯಕ್ಕೆ ಬಳಸುವ ಕಲ್ಟಿವೇಟರ್ ಅಳವಡಿಸಿರುವ) ಅನ್ನು ಬನ್ನೂರು ಕಡೆಯಿಂದ ಶ್ರೀರಂಗಪಟ್ಟಣದ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ನಿಮ್ಮ ಮನೆಯಿದ ಸ್ವಲ್ಪ ದೂರದಲ್ಲಿರುವ ತೇಜಮ್ಮ ಎಂಬುವರ ಮನೆಗೆ ಹೋಗಲು ಮುಖ್ಯ ರಸ್ತೆಯ ಪೂರ್ವ ದಿಕ್ಕಿನಿಂದ ಪಶ್ಚಿಮದ ಕಡೆಗೆ ರಸ್ತೆ ದಾಟುತ್ತಿದ್ದ ಚಾಸಾ–2 ರವರಿಗೆ ಡಿಕ್ಕಿ ಪಡಿಸಿದ್ದು, ಸದರಿ ಅಪಘಾತಕ್ಕೆ ಕಾರಣರಾಗಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.**281** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಅದೇ ರೀತಿ ಮೇಲೆ ಹೇಳಿರುವ ದಿನಾಂಕ, ಸಮಯ ಮತ್ತು ಸ್ಥಳದಂದು ಆರೋಪಿತರಾದ ನೀವು ನಿಮ್ಮ ಟ್ರ್ಯಾಕ್ಟರ್ (ವ್ಯವಸಾಯಕ್ಕೆ ಬಳಸುವ ಕಲ್ಟಿವೇಟರ್ ಅಳವಡಿಸಿರುವ) ಅನ್ನು ಬನ್ನೂರು ಕಡೆಯಿಂದ ಶ್ರೀರಂಗಪಟ್ಟಣದ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ನಿಮ್ಮ ಮನೆಯಿದ ಸ್ವಲ್ಪ ದೂರದಲ್ಲಿರುವ ತೇಜಮ್ಮ ಎಂಬುವರ ಮನೆಗೆ ಹೋಗಲು ಮುಖ್ಯ ರಸ್ತೆಯ ಪೂರ್ವ ದಿಕ್ಕಿನಿಂದ ಪಶ್ಚಿಮದ ಕಡೆಗೆ ರಸ್ತೆ ದಾಟುತ್ತಿದ್ದ ಚಾಸಾ-2 ರವರಿಗೆ ಡಿಕ್ಕಿ ಪಡಿಸಿದ ಪರಿಣಾಮ ಚಾಸಾ-2 ರವರು ರಸ್ತೆಯ ಮೇಲೆ ಬಿದ್ದು, ಚಾಸಾ-2 ರವರ ಹೊಟ್ಟೆಯ ಎಡಭಾಗಕ್ಕೆ ತರಚಿದ ಗಾಯವಾಗಿದ್ದು, ಮೈಕೈಗೆ ಹಾಗೂ ಸೊಂಟದ ಮೂಳೆಗೆ ಪೆಟ್ಟು ಬಿದ್ದು ತೀವ್ರ ಸ್ವರೂಪದ ಗಾಯಗಳಾಗಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.**125(b)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಕೊನೆಯದಾಗಿ, ಮೇಲೆ ಹೇಳಿರುವ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ಸದರಿ ಅಪಘಾತದ ನಂತರ ವಿಚಾರವನ್ನು ಪೊಲೀಸರಿಗೆ ತಿಳಿಸದೆ ಹಾಗೂ ಗಾಯಾಳುಗಳಿಗೆ ಚಿಕಿತ್ಸೆ ಕೊಡಿಸದೆ ಸ್ಥಳದಿಂದ ಪರಾರಿಯಾಗಿದ್ದು, ಆ ಮೂಲಕ ಭಾರತೀಯ ಮೋಟಾರ್ ವಾಹನ ಕಾಯ್ದೆಯ ಕಲಂ.187 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

**(ಮೇಲ್ಕಂಡ ಆರೋಪಗಳ ಬಗ್ಗೆ ಆರೋಪಿಯಾದ ನೀವು ಈ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದ್ದು ಎಂದು ನಾನು ನಿರ್ದೇಶಿಸುತ್ತೇನೆ.)**

-Sd/-
**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**ಆರೋಪಿಯ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

-Sd/-

**(ಸಚಿನ್ ಹೆಚ್.ಆರ್)**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ ,ಟಿ.ನರಸೀಪುರ.**

**ಆರೋಪಿ ಸಹಿಃ**